# ಮನಸ್ಸು ಮತ್ತು ಸಾಧನೆ



ಚಿತ್ತಶುದ್ಧಿ ಆಗುವವರೆಗೂ ಭಗವಂತನ ದರ್ಶನ ದೊರೆಯುವ ಹಾಗಿಲ್ಲ. ಕಾಮ, ಕ್ರೋಧ, ಲೋಭ ಇವನ್ನೆಲ್ಲ ಜಯಿಸಿದರೆ ಮಾತ್ರ ಆತನ ಕೃಪೆ ಒದಗುತ್ತದೆ; ಆತನ ದರ್ಶನ ದೊರೆಯುತ್ತದೆ.

ಎಲ್ಲಾ ಮನಸ್ಸಿನ ಮೇಲೆ ನಿಂತಿದೆ. ಮನಸ್ಸೇ ಬಂಧನಕ್ಕೆ ಕಾರಣ, ಮನಸ್ಸೇ ಮುಕ್ತಿಗೆ ಕಾರಣ. ಮನಸ್ಸಿಗೆ ಯಾವ ಬಣ್ಣ ಕೊಟ್ಟರೆ ಅದು ಆ ಬಣ್ಣ ಧರಿಸುತ್ತದೆ. ಉದಾಹರಣೆಗೆ ಅಗಸನ ಮನೆಯಿಂದ ತಂದ ಬಟ್ಟೆ. ಕೆಂಪು ಬಣ್ಣದಲ್ಲಿ ಅದ್ದಿದರೆ ಕೆಂಪು, ನೀಲಿ ಬಣ್ಣದಲ್ಲಿ ಅದ್ದಿದ್ದರೆ ನೀಲಿ, ಹಳದಿ ಬಣ್ಣದಲ್ಲಿ ಅದ್ದಿದರೆ ಹಳದಿ, ಮತ್ತಾವ ಬಣ್ಣದಲ್ಲಿ ಅದ್ದಿದ್ದರೂ ಆ ಬಣ್ಣ ಧರಿಸುತ್ತದೆ. ನೋಡಿಲ್ಲವೆ, ಒಂದಿಷ್ಟು ಇಂಗ್ಲಿಷ್ ಓದುವುದಕ್ಕೆ ಕಲಿತುಕೊಂಡಿರಿ ಎಂದರೆ, ನಿಮ್ಮನ್ನು ಹೇಳದೆ ಕೇಳದೆ 'ಕೋಸ್‌ಪಿಸ್' ಎಂಬ ಇಂಗ್ಲಿಷ್ ಪದಗಳು ನಿಮ್ಮ ಬಾಯಿಂದ ಹೊರ ಬೀಳುವುದನ್ನ? (ಎಲ್ಲರೂ ನಗುತ್ತಾರೆ.) ಬಳಿಕ ಕಾಲಿಗೆ ಬೂಟ್ಸು, ಸಿಳ್ಳು ಹಾಕುತ್ತಾ ಆಲಾಪನೆ ಮಾಡುವುದು ಇವೆಲ್ಲಾ ಬಂದುಬಿಡುತ್ತವೆ. ಇವೆಲ್ಲಾ ಒಂದೇ ಜೊತೆ. ವಿದ್ಯಾವಂತ ಸಂಸ್ಕೃತ ಕಲಿತುಕೊಂಡಿದ್ದೇ ಆದರೆ ಪದೇ ಪದೇ ಸಂಸ್ಕೃತ ಶ್ಲೋಕಗಳನ್ನು ಎತ್ತಿ ಹೇಳುತ್ತಲೇ ಇರುತ್ತಾನೆ. ನೀನು ಕೆಟ್ಟವರೊಡನೆ ಬೆಳೆದರೆ, ನಿನ್ನ ನಡೆನುಡಿ ವ್ಯವಹಾರ ಎಲ್ಲವೂ ಅವರಂತೆ ಆಗಿಬಿಡುತ್ತವೆ; ಭಕ್ತರ ಸಹವಾಸದಲ್ಲಿ ಬೆಳೆದರೆ, ಮನಸ್ಸು ಭಗವಚ್ಚಿಂತನೆ, ಭಗವತ್ಕಥೆ ಇವುಗಳಲ್ಲೇ ನಿರತವಾಗಿರುತ್ತದೆ.

ಮನಸ್ಸೇ ಎಲ್ಲಕ್ಕೂ ಕಾರಣ. ಮನುಷ್ಯನ ಒಂದು ಪಕ್ಕದಲ್ಲಿ ಹೆಂಡತಿ, ಇನ್ನೊಂದು ಪಕ್ಕದಲ್ಲಿ ಮಗಳು. ಒಬ್ಬಳಿಗೆ ಒಂದು ವಿಧದಲ್ಲಿ ಇನ್ನೊಬ್ಬಳಿಗೆ ಇನ್ನೊಂದು ವಿಧದಲ್ಲಿ ಪ್ರೀತಿ ತೋರಿಸುತ್ತಾನೆ. ಆದರೆ ಮನಸ್ಸು ಮಾತ್ರ ಒಂದೇ ಒಂದು.

ಮನಸ್ಸಿನಿಂದಲೇ ಬಂಧನ, ಮನಸ್ಸಿನಿಂದಲೇ ಮುಕ್ತಿ. 'ನಾನು ಮುಕ್ತಪುರುಷ. ಸಂಸಾರದಲ್ಲಿ ಇದ್ದರೆ ತಾನೆ ಏನು, ಅರಣ್ಯದಲ್ಲಿ ಇದ್ದರೆ ತಾನೆ ಏನು, ನನಗೆಲ್ಲಿಯದು ಬಂಧನ ? ನಾನು ಭಗವಂತನ ಮಗು; ರಾಜಾಧಿರಾಜನ ಮಗು. ನನಗಾವುದರ ಬಂಧನ ?' ಎಂಬುದಾಗಿ ಯಾರು ಸತತ ಚಿಂತಿಸುತ್ತಾನೊ, ಆತ ಮುಕ್ತನಾಗಿಬಿಡುತ್ತಾನೆ. ಒಂದು ಪಕ್ಷ ಹಾವೇನಾದರೂ ಕಡಿದರೆ 'ನನ್ನನ್ನು ವಿಷ ಏನೂ ಮಾಡಲಾರದು' ಎಂಬುದಾಗಿ ದೃಢವಾಗಿ ನಂಬಿದರೆ ಆಗ ಅದರಿಂದ ಪಾರಾಗಿಬಿಡಬಹುದು. ಹಾಗೆ 'ನಾನು ಬದ್ಧನಲ್ಲ, ಮುಕ್ತ' ಎಂಬುದಾಗಿ ದೃಢವಾಗಿ ನಂಬಿದರೆ ಹಾಗೇ ಆಗಿಬಿಡಬಹುದು – ಮುಕ್ತನೇ ಆಗಿಬಿಡಬಹುದು.

ಭಗವಂತನ ನಾಮ ಜಪಿಸಿದರೆ ಮನುಷ್ಯನ ದೇಹ ಮತ್ತು ಮನಸ್ಸು ಎಲ್ಲವೂ ಶುದ್ಧವಾಗಿಬಿಡುತ್ತದೆ. ಕೇವಲ ಪಾಪ, ನರಕ ಈ ಮಾತುಗಳಲ್ಲೇ ಏಕೆ ತೊಡಗಬೇಕು? ಭಗವಂತನಿಗೆ ಒಮ್ಮೆ ಹೇಳಿಬಿಡು: 'ಹೇ ಭಗವಂತ, ಇದುವರೆಗೆ ಅನ್ಯಾಯ ಕರ್ಮಗಳನ್ನು ಮಾಡಿದ್ದೇನೆ, ಇನ್ನು ಮುಂದೆ ಮಾಡುವುದಿಲ್ಲ.' ಆತನ ಹೆಸರಿನಲ್ಲಿ ಶ್ರದ್ಧೆ ಯಿಡು.

ವಿವೇಕ ವೈರಾಗ್ಯಗಳನ್ನು ಗಳಿಸಿಕೊಂಡು ಬೇಕಾದರೆ ಸಂಸಾರದಲ್ಲಿ ಇರಬಹುದು. ಸಂಸಾರ ಸಮುದ್ರದಲ್ಲಿ ಕಾಮಕ್ರೋಧಾದಿ ಮೊಸಳೆ ವಾಸವಾಗಿವೆ. ಅರಸಿನ ಮೈಗೆ ಹಚ್ಚಿಕೊಂಡು ನೀರಿಗೆ ಇಳಿದರೆ ಮೊಸಳೆಗಳ ಕಾಟ ಇರುವುದಿಲ್ಲ. ವಿವೇಕ ವೈರಾಗ್ಯವೇ ಅರಸಿನ. ಸದಸದ್ವಿಚಾರಕ್ಕೆ ವಿವೇಕ ಅಂತ ಹೆಸರು. ಭಗವಂತನೇ ಸತ್, ನಿತ್ಯವಸ್ತು; ಉಳಿದುದೆಲ್ಲಾ ಅಸತ್, ಅನಿತ್ಯವಸ್ತು, ಎರಡು ದಿನದ ಬಾಳಿನವು – ಎಂಬುದೇ ಜ್ಞಾನ. ಭಗವಂತನಲ್ಲಿ ಅನುರಾಗ ಬೆಳಸಿಕೊಳ್ಳಬೇಕು. ಆತನ ಕಡೆ ಮನಸ್ಸು ಹರಿಯುವಂತೆ ಮಾಡಿಕೊಳ್ಳಬೇಕು, ಆತನನ್ನು ಪ್ರೀತಿಸಬೇಕು.

ರಾಗಾಭಕ್ತಿ ಉಂಟಾಗದ ಹೊರತು ಭಗವಂತನ ಸಾಕ್ಷಾತ್ಕಾರ ದೊರೆಯುವುದಿಲ್ಲ. ಆತನ ಮೇಲೆ ಪ್ರೀತಿ ಉಂಟಾಗಬೇಕು. ಸಾಂಸಾರಿಕ ಬುದ್ಧಿ ಸಂಪೂರ್ಣವಾಗಿ ತೊಲಗಿಹೋಗಿ ನೂರಕ್ಕೆ ನೂರು ಭಾಗ ಮನಸ್ಸು ಆತನಲ್ಲಿ ನೆಲೆಸಬೇಕು. ಆಗ ಮಾತ್ರವೇ ಆತನ ಸಾಕ್ಷಾತ್ಕಾರ ದೊರೆಯುತ್ತದೆ.

ಚಿತ್ತಶುದ್ಧಿ ಆಗದೆ ಇತ್ತು ಎಂದರೆ, ಭಗವಂತನ ದರ್ಶನವನ್ನು ಪಡೆಯಲಾಗುವುದಿಲ್ಲ. ಕಾಮಕಾಂಚನಾಸಕ್ತಿಯಿಂದ ಮನಸ್ಸು ಮಲಿನವಾಗಿಬಿಟ್ಟಿದೆ — ಕೊಳೆಯಿಂದ ತುಂಬಿದೆ. ಸೂಜಿಯು ಮಣ್ಣಿನಿಂದ ಆವೃತವಾಗಿದ್ದರೆ ಆಗ ಸೂಜಿಕಲ್ಲು ಅದನ್ನು ಎಳೆಯಲಾರದು. ಆ ಮಣ್ಣನ್ನು ತೊಳೆದುಬಿಟ್ಟಿದ್ದೇ ಆದರೆ ಒಡನೆ ಸೂಜಿಕಲ್ಲು ಅದನ್ನು ಎಳೆದುಬಿಡುತ್ತದೆ. ಅದೇ ರೀತಿ ಮನಸ್ಸಿನ ಕೊಳಕನ್ನು ಕಣ್ಣೀರಿನಿಂದ ತೊಳೆದುಬಿಡಬಹುದು. ಯಾರೇ ಆಗಲಿ, 'ಹೇ ಭಗವಂತ, ಮತ್ತೆ ನಾನು ಅಂಥ ಕಾರ್ಯಗಳನ್ನು ಮಾಡುವುದಿಲ್ಲ' ಅಂತ ಹೇಳಿ ಅನುತಾಪದಿಂದ ಅತ್ತುದೇ ಆದರೆ, ಕೊಳೆ ತೊಳೆದುಹೋಗುತ್ತದೆ. ಆಗ ಭಗವದ್ರೂಪದ ಸೂಜಿಗಲ್ಲು ಮನಸ್ಸೆಂಬ ಸೂಜಿಯನ್ನು ಎಳೆದುಕೊಂಡು ಬಿಡುತ್ತದೆ. ಆಗ ಸಮಾಧಿಯುಂಟಾಗುತ್ತದೆ. ಭಗವಂತನ ದರ್ಶನ ದೊರೆಯುತ್ತದೆ.

ಶ್ರೀರಾಮಕೃಷ್ಣ ವಚನವೇದದಿಂದ